ಜಮೀನು ಕ್ರಯಕ್ಕೆ ಅನುಮತಿ

2026(2173); ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ರಾಮನಗರ ತಾಲ್ಲೂಕು, ಬಿಡದಿ ಹೋಬಳಿ ಕಂಚುಗಾರನಹಳ್ಳಿ ಗ್ರಾಮದ ಸ.ನಂ. 254 ರಲ್ಲಿನ ಜಮೀನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಮಂಜೂರಾಗಿದೆಯೇ;

ಆ) ಹಾಗಾದರೆ ಕ್ರಯ ಮಾಡಿರುವವರು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆದಿದ್ದಾರೆಯೇ, ಪೂರ್ವಾನುಮತಿ ಪಡೆದುಕೊಳ್ಳದಿದ್ದರೆ ಸರ್ಕಾರ ಮುಟ್ಟುಗೋಲು ಹಾಕಿಕೊಳ್ಳಲಾಗಿದೆಯೇ;

ಇ) ಇಲ್ಲದಿದ್ದರೆ, ಯಾವ ಕಾಲಮಿತಿಯಲ್ಲಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು,)

ಅ) ರಾಮನಗರ ತಾಲ್ಲೂಕು, ಬಿಡದಿ ಹೋಬಳಿ ಕಂಚುಗಾರನಹಳ್ಳಿ ಗ್ರಾಮದ ಸ.ನಂ. 254 ರಲ್ಲಿ ಒಟ್ಟು ವಿಸ್ತೀರ್ಣ 05–12 ಎಕರೆ ಇದ್ದು, ಈ ಪೈಕಿ 0–12 ಗುಂಟೆ ಮೋಜಿಣಿ ಆಕಾರ್ ಬಂದ್‌ನಂತೆ 'ಎ' ಖರಾಬು ಎಂದು ವರ್ಗೀಕರಣಗೊಂಡಿದ್ದು, ಪ್ರಸ್ತುತ ಜಮೀನು ಡಿ.ಡಿ. ನಂ. 6/45–46 ರಂತೆ ಹಾಗೂ ಡಿ.ಡಿ. ನಂ. 3/46–47 ದಿನಾಂಕ: 13–10–46, ಎಎಲ್‌ಎನ್/199–538–556 ದಿನಾಂಕ:18–10–46 ಹುಕುಂ ಮೇರೆಗೆ ಸರ್ಕಾರದಿಂದ ಪರಿಶಿಷ್ಟ ಜಾತಿಗೆ ಸೇರಿದ ಶ್ರೀ ಸಲ್ಲಾಪುರಿ ಬಿನ್ ವುಲಿಯಪ್ಪ ರವರಿಗೆ ಮಂಜೂರಾದ ಜಮೀನಾಗಿರುತ್ತದೆ.

ಆ) ಪ್ರಶ್ನಿತ ಜಮೀನನ್ನು ಕ್ರಯಕ್ಕೆ ಪಡೆದಿರುವ ಕುರಿತು ಸರ್ಕಾರದ ಪೂರ್ವಾನುಮತಿ ಪಡೆದಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ. ಪ್ರಶ್ನಿತ ಜಮೀನನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳುವ ಬಗ್ಗೆ ಸಾಧಕ–ಬಾಧಕಗಳನ್ನು ಪರಿಶೀಲಿಸಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಹಲವು ಜಮೀನುಗಳ ಪರಭಾರೆ ನಿಷೇಧ) ಕಾಯಿದೆ 1978ರ ಕಲಂ 4(2) ರಡಿಯಲ್ಲಿ ವಿಚಾರಣೆ ನಡೆಸಿ ಕ್ರಮ ತೆಗೆದುಕೊಳ್ಳುವ ಅಧಿಕಾರ ಉಪವಿಭಾಗಾಧಿಕಾರಿಗಳ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

ಇ) ವಿಚಾರಣೆ ನಡೆಸುವ ಪ್ರಾಧಿಕಾರ ಉಪವಿಭಾಗಾಧಿಕಾರಿಗಳು, ರಾಮನಗರ ಉಪವಿಭಾಗ, ರಾಮನಗರ ರವರು ಸಕ್ಷಮ ಪ್ರಾಧಿಕಾರಿಗಳಾಗಿರುತ್ತಾರೆ.

ಏತ ನೀರಾವರಿ ಯೋಜನೆಗಳು

2027(1213); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ರಾಜ್ಯದಲ್ಲಿರುವ ಏತ ನೀರಾವರಿ ಯೋಜನೆಗಳ ಸಂಖ್ಯೆ ಎಷ್ಟು?

ಆ) ಅವುಗಳಲ್ಲಿ ಎಷ್ಟು ಜಾರಿಯಲ್ಲಿವೆ ಹಾಗೂ ಎಷ್ಟು ಸ್ಥಗಿತಗೊಂಡಿವೆ (ಜಿಲ್ಲಾವಾರು ವಿವರ ಒದಗಿಸುವುದು)

ಇ) ಸ್ಥಗಿತಗೊಂಡಿರುವ ಏತ ನೀರಾವರಿ ಯೋಜನೆಗಳನ್ನು ಪುನಃ ಪ್ರಾರಂಭಿಸುವ ಯೋಚನೆ ಸರ್ಕಾರಕ್ಕಿದೆಯೇ?

ಶ್ರೀ ಎಂ.ಬಿ. ಪಾಟೀಲ್ (ಮಾನ್ಯ ಜಲ ಸಂಪನ್ಮೂಲ ಸಚಿವರು)

ಅ) ರಾಜ್ಯದಲ್ಲಿರುವ ಏತ ನೀರಾವರಿ ಯೋಜನೆಗಳ ಒಟ್ಟು ಸಂಖ್ಯೆ 138.

ಆ) ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಇ) ಸ್ಥಗಿತಗೊಂಡಿರುವ ಏತ ನೀರಾವರಿ ಯೋಜನೆಗಳನ್ನು ಪುನಃ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.